ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ,
ಕುಂದಾಪುರ

ಸಿ.ಸಿ. ನಂಬ್ರಃ2284/2017

ಚಾಸಾಃ4 ಪ್ರಾಸಾಃ4

ದಿನಾಂಕಃ 07.11.2023

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಪ್ರಮೋದ ಕುಮಾರ್ |
| ತಂದೆಯ ಹೆಸರು | : | ಲೇಟ್ ಎಚ್ ವಿ ಶೆಟ್ಟಿ |
| ವಯಸ್ಸು | : | 40 ವರ್ಷ |
| ಉದ್ಯೋಗ | : | ಮ್ಯಾನೇಜರ್ |
| ವಾಸ ಸ್ಥಳ | : | ಕುಂದಾಪುರ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಭಾ. ದಂ. ಪ್ರ, ಸಂ, ಕಲಂ 299 ಸಿ ಆರ್ ಪಿ ಸಿ ರಡಿಯಲ್ಲಿ ವಿಚಾರಣೆಃ ಮಾನ್ಯ ಸ.ಸ.ಅ.ರವರಿಂದಃ**

ಚಾಸಾ-1 ರವರು ನಮ್ಮ ನೆರೆಮನೆಯವರು. ದಿಃ 26-10-2013 ರಂದು ಬೆಳಿಗ್ಗೆ 8-45 ಗಂಟೆ ಸುಮಾರಿಗೆ ಚಾಸಾ-1 ರವರು ಕುಂದಾಪುರ ಹೆಡ್ ಪೋಸ್ಟ್ ಆಫೀಸ್ ಕಡೆಯಿಂದ ರಾಮ ಮಂದಿರದ ರಸ್ತೆಯಲ್ಲಿ ನಡೆದುಕೊಂಡು ಹೋಗುವಾಗ, ರಾಮ ಮಂದಿರ ಕಡೆಯಿಂದ ಇಬ್ಬರು ಮೋಟಾರು ಸೈಕಲಿನಲ್ಲಿ ಬಂದು ಅವರ ಬಳಿ ಬೈಕು ನಿಲ್ಲಿಸಿ, ಬೈಕಿನ ಹಿಂಬದಿ ಕುಳಿತ ವ್ಯಕ್ತಿ ಬೈಕಿನಿಂದ ಇಳಿದು ಅವರ ಕುತ್ತಿಗೆಯಲ್ಲಿದ್ದ ಚಿನ್ನದ ಕರಿಮಣಿ ಸರವನ್ನು ಎಳೆದುಕೊಂಡು ಪರಾರಿಯಾಗಿರುವುದಾಗಿ ತಿಳಿಸಿ ಪೊಲೀಸರು ಘಟನಾ ಸ್ಥಳದಲ್ಲಿ ಪಂಚನಾಮೆ ಮಾಡುವುದಾಗಿ ಸ್ಥಳದಲ್ಲಿ ಪಂಚರಾಗಿ ಹಾಜರಾಗಬೇಕೆಂದು ತಿಳಿಸಿದ್ದರು.

ಅದರಂತೆ ನಾನು ಘಟನಾ ಸ್ಥಳಕ್ಕೆ ಹೋಗಿದ್ದು, ಚಾಸಾ-1 ರವರು ಆರೋಪಿಗಳು ಸರವನ್ನು ಎಳೆದುಕೊಂಡು ಹೋದ ಸ್ಥಳವನ್ನು ತೋರಿಸಿಕೊಟ್ಟಿದ್ದು, ಪೊಲೀಸರು ಬೆಳಿಗ್ಗೆ 11-45 ರಿಂದ 12 ಗಂಟೆಯವರೆಗೆ ನನ್ನ ಮತ್ತು ಚಾಸಾ-5 ರವರ ಸಮಕ್ಷಮ ಸ್ಥಳ ಪಂಚನಾಮೆ ಮತ್ತು ನಕಾಶೆಯನ್ನು ತಯಾರಿಸಿರುತ್ತಾರೆ. ಸದ್ರಿ ಪಂಚನಾಮೆಗೆ ನಾನು ಸಹಿ ಮಾಡಿರುತ್ತೇನೆ. ಸಾಕ್ಷಿಯು ಪಂಚನಾಮೆ ಮತ್ತು ನಕಾಶೆಯಲ್ಲಿನ ತಮ್ಮ ಸಹಿಯನ್ನು ಗುರುತಿಸಿದ ಮೇರೆಗೆ ಸದ್ರಿ ದಾಖಲೆಗಳನ್ನು ನಿಪಿ-4 ಮತ್ತು 5 ಎಂದು, ಅದರಲ್ಲಿನ ಸಾಕ್ಷಿಯ ಸಹಿಗಳನ್ನು ನಿಪಿ-4(ಎ)

ಮತ್ತು ನಿಪಿ-5(ಎ) ಎಂದು ಗುರುತಿಸಲಾಯಿತು. ಮಹಜರು ಸಮಯದಲ್ಲಿ ಛಾಯಚಿತ್ರ ತೆಗೆದಿರುತ್ತಾರೆ. ಸಾಕ್ಷಿಯು ಭಾವಚಿತ್ರದಲ್ಲಿ ತಾವು ಇರುವುದಾಗಿ ನೋಡಿ ಗುರುತಿಸಿದ ಮೇರೆಗೆ ಸದ್ರಿ ಪೋಟೋಗಳನ್ನು ನಿಪಿ-6 ಮತ್ತು 7 ಎಂದು ಗುರುತಿಸಲಾಯಿತು. ಈ ಬಗ್ಗೆ ನಾನು ಪೊಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆ.

ಆರೋಪಿಗಳು ತಲೆಮರೆಸಿಕೊಂಡಿದ್ದರಿಂದ ಪಾಟೀ ಸವಾಲು ಇಲ್ಲ ಎಂದು ಪರಿಗಣಿಸಲಾಯಿತು.

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**